ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ
ದಿನಾಂಕ : DATE : 28/05/2019



# ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವಕ್ಕೆ ಸಂಚಕಾರ

28-5-19

**ಸಂ.ಕ. ಸಮಾಚಾರ ಬೆಂಗಳೂರು**

ಇತ್ತೀಚಿನ ದಿನಗಳಲ್ಲಿ ರಾಜಕೀಯ ಪಕ್ಷಗಳಲ್ಲಿ ಆಂತರಿಕ ಪ್ರಜಾಪ್ರಭುತ್ವ ಸತ್ತು ಹೋಗಿದೆ ಎಂದು ರಾಜ್ಯ ವಿಧಾನಸಭೆಯ ಸಭಾಧ್ಯಕ್ಷ ಕೆ.ಆರ್ ರಮೇಶ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

ಹಿರಿಯ ಪತ್ರಕರ್ತ ಸಿ.ಎಂ. ರಾಮಚಂದ್ರ ಅವರ ಕಾಕ್‌ಪಿಟ್ ಆಫ್ ಇಂಡಿಯಾಸ್ ಪೊಲಿಟಿಕಲ್ ಬ್ಯಾಟಲ್ಸ್ – ಕರ್ನಾಟಕ ಆಂಗ್ಲ ಭಾಷೆಯ ಪುಸ್ತಕವನ್ನು ಲೇಖಕರ ಮನೆಯಲ್ಲಿ ಬಿಡುಗಡೆ ಮಾಡಿ ಮಾತನಾಡಿದ ಅವರು, ಒಂದೆಡೆ ಹೊಗಳುಭಟ್ಟರು ಮತ್ತೊಂದೆಡೆ ಭ್ರಷ್ಟರು ನಾಯಕರನ್ನು ಓಲೈಸಿ ಒಲಿಸಿಕೊಳ್ಳಲು ಎಲ್ಲಕ್ಕೂ ಸೈ ಎನ್ನುವ ಸಂಸ್ಕೃತಿಯನ್ನು ಮೈಗೂಡಿಸಿಕೊಂಡಿರುವುದರಿಂದ ಪ್ರಜಾಪ್ರಭುತ್ವಕ್ಕೇ ಸಂಚಕಾರ ಬಂದೊದಗುವ ಪರಿಸ್ಥಿತಿಗೆ ನಾವು ಜಾರಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.

ಓರ್ವ ಗ್ರಾಮ ಪಂಚಾಯತ್ ಸದಸ್ಯನಿಂದ ಹಿಡಿದು ಮಂತ್ರಿ–ಮುಖ್ಯಮಂತ್ರಿಯವರೆಗೆ ಎಲ್ಲಾ ಪರವಾನಗಿಗಳೂ ತನಗೇ ಬೇಕು, ತನ್ನವರಿಗೇ ಬೇಕು ಎಂಬ ಮನೋಭಾವ ಮನೋಧರ್ಮ ತಾಳುತ್ತಿದ್ದಾರೆ. ಚುನಾವಣೆಯಲ್ಲೂ ತಮ್ಮವರು, ತಮ್ಮ ಮಕ್ಕಳು, ಮೊಮ್ಮಕ್ಕಳು ಎಂದು ಟಿಕೆಟ್ ಕೇಳುತ್ತಿದ್ದಾರೆ. ಹೀಗಾದರೆ ಬೇರೆಯವರ ಪಾಡೇನು. ಇಂತಹ ವ್ಯವಸ್ಥೆಯನ್ನು ಪ್ರಶ್ನೆ ಮಾಡಬೇಕಾದ ಮಾಧ್ಯಮದವರೂ ಮೌನವಾಗಿದ್ದಾರೆ ಎಂದು ಬೇಸ ವ್ಯಕ್ತಪಡಿಸಿದರು.

ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರು ರಾಷ್ಟ್ರಪತಿ ಸ್ಥಾನಕ್ಕೆ ಸ್ಪರ್ಧಿಸಿದ್ದ ಪಕ್ಷದ ಅಧಿಕೃತ ಅಭ್ಯರ್ಥಿ ನೀಲಂ ಸಂಜೀವರೆಡ್ಡಿ ಅವರನ್ನು ಬೆಂಬಲಿಸದೆ, ಆತ್ಮಸಾಕ್ಷಿ ಮತ ನೀಡಿ ಎಂದು ಕರೆಕೊಟ್ಟು ಪಕ್ಷೇತರ ಅಭ್ಯರ್ಥಿ ವರಾಹಗಿರಿ ವೆಂಕಟಗಿರಿ ಅವರಿಗೆ ಬೆಂಬಲಿಸಿದ್ದರು. ಅಂದಿನ ಕಾಲದಲ್ಲಿ ತತ್ವ–ಸಿದ್ಧಾಂತಕ್ಕೆ ಬೆಲೆ ಇತ್ತು. ಆದರೆ, ಇದೀಗ ತತ್ವ–ಸಿದ್ಧಾಂತಗಳೇ ಕಣ್ಮರೆಯಾಗಿವೆ ಎಂದರು.

ಮುಖ್ಯಮಂತ್ರಿಯಾಗಿದ್ದ ಡಿ. ದೇವರಾಜ ಅರಸು ಅವರು ಸ್ವಾಭಿಮಾನಿ. ಅವರು ತಮ್ಮ ದೊಡ್ಡ ದೇಹವನ್ನು ಹೆಚ್ಚು ಬಗ್ಗಿಸಲು ಸಾಧ್ಯವಾಗಲಿಲ್ಲ. ಮಂತ್ರಿ ಸ್ಥಾನ ವಂಚಿತರಾಗಿದ್ದ ಕೆಲವರ ಷಡ್ಯಂತ್ರಕ್ಕೆ ಬಲಿಯಾದರು. ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರೆಯಲು ಸಾಧ್ಯವಾಗಲಿಲ್ಲ ಎಂದರು.

ಬೆಂಗಳೂರಿನ ಸುಭಾಷ್‌ನಗರ ಮೈದಾನದಲ್ಲಿ ಚಕ್ರವರ್ತಿ ರಾಜಗೋಪಾಲಾಚಾರಿ, ಎನ್.ಜಿ ರಂಗಾ, ಕೃಷ್ಣ ಮೆನನ್, ಅಟಲ್ ಬಿಹಾರಿ ವಾಜಪೇಯಿ ಅವರಂತಹ ಮೇರು ನಾಯಕರ ಸಾರ್ವಜನಿಕ ಸಭೆಗಳಿಗೆ ಜನ ಸಾಗರವೇ ಹರಿದು ಬರುತ್ತಿತ್ತು. ಇದೀಗ ಸಾರ್ವಜನಿಕ ಸಭೆಗಳಿಗೆ ಜನರನ್ನು ಕರೆತರಲು ಸಾರಿಗೆ ಸೌಲಭ್ಯ ಕಲ್ಪಿಸುವುದರ ಜೊತೆಗೆ 'ಪ್ಯಾಕೇಜ್ ಟು ಪೇಮೆಂಟ್' ವ್ಯವಸ್ಥೆ ಮಾಡಬೇಕಾಗಿದೆ. ಇವೆಲ್ಲವನ್ನೂ ಅವಲೋಕಿಸಿದರೆ ನಾವು ಎತ್ತ ಸಾಗುತ್ತಿದ್ದೇವೆ ಎಂಬ ಬಗ್ಗೆ ಆತಂಕ ಮೂಡುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಬೆಂಗಳೂರಿನಲ್ಲಿ ಅತ್ಯಂತ ಸುಶಿಕ್ಷಿತರು ಹಾಗೂ ಪ್ರಜ್ಞಾವಂತರೂ ಇದ್ದರೂ ಮತದಾನ ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದ ಅವರು, ನ್ಯಾಯಾಲಯಗಳೂ ಕೂಡಾ ತೀರ್ಪುಗಳನ್ನು ಪ್ರಕಟಿಸುತ್ತಿವೆಯೇ ಹೊರತು ನ್ಯಾಯ ಕೊಡುತ್ತಿಲ್ಲ ಎಂಬ ಅಭಿಪ್ರಾಯಗಳು ಹೊರಹೊಮ್ಮುತ್ತಿವೆ. ಶಿಕ್ಷಣ ಕ್ಷೇತ್ರದಲ್ಲೇ ಅತ್ಯುನ್ನತ ಸ್ಥಾನ ಎಂದು ಪರಿಗಣಿಸಲ್ಪಡುವ ವಿಶ್ವವಿದ್ಯಾಲಯಗಳ ಕುಲಪತಿಗಳ ಮೇಲೆಯೇ ಸಿಐಡಿ ವಿಚಾರಣೆಗಳು, ಇನ್ನು ಮಾಧ್ಯಮದ ಬಗ್ಗೆ ಮಾತನಾಡುವ ಹಾಗೆಯೇ ಇಲ್ಲ ಅಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮರಣ ಪ್ರಮಾಣ ಪತ್ರ ಪಡೆಯಲೂ ಲಂಚ ನೀಡಬೇಕಾದ ಅನಿವಾರ್ಯತೆ ಎದುರಾಗಿದೆ. ಇದಕ್ಕಿಂತಲೂ ತಲೆ ತಗ್ಗಿಸುವ ವಿಚಾರ ಇರಲು ಸಾಧ್ಯವೇ ಎಂದು ಪ್ರಶ್ನೆ ಮಾಡಿದರು.

ಒಂದು ಕಾಲದಲ್ಲಿ ವಿಧಾನ ಸಭೆಯ ಪಡಸಾಲೆಯಲ್ಲಿ ಹಿರಿಯ ಪತ್ರಕರ್ತರ ಮುಂದೆ ಕುಳಿತು ಕೊಳ್ಳಲು ನಮಗೆ ಭಯವಾಗುತ್ತಿತ್ತು. ಈಗಲೂ ಭಯವಾಗುತ್ತದೆ. ಆದರೆ, ಕಾರಣ ಬೇರೆ. ಭ್ರಷ್ಟಾಚಾರವು ಇಂದು ಕೇವಲ ರಾಜಕೀಯ ಕ್ಷೇತ್ರಕ್ಕೆ ಸೀಮಿತವಾಗಿಲ್ಲ. ಮಾಧ್ಯಮ ಕ್ಷೇತ್ರವನ್ನೂ ವ್ಯಾಪಿಸಿದೆ. ರಾಜಕಾರಣಿಗಳಿಗಿಂತಲೂ ಮಾಧ್ಯಮ ಕ್ಷೇತ್ರದಲ್ಲಿ ಹೆಚ್ಚು ಶ್ರೀಮಂತರಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಸಭಾಪತಿ ಪ್ರೊ. ಬಿ.ಕೆ. ಚಂದ್ರಶೇಖರ್, ಲೇಖಕ ಸಿ.ಎಂ. ರಾಮಚಂದ್ರ, ಹಿರಿಯ ಪತ್ರಕರ್ತರಾದ ಎಸ್.ಕೆ. ಶೇಷಚಂದ್ರಿಕ, ಅರಕೆರೆ ಜಯರಾಂ. ಟಿ.ಎಸ್. ರಂಗಣ್ಣ ಮತ್ತಿತರರು ಉಪಸ್ಥಿತರಿದ್ದರು.



ಹಿರಿಯ ಪತ್ರಕರ್ತ ಸಿ.ಎಂ. ರಾಮಚಂದ್ರ ಅವರ 'ಕಾಕ್‌ಪಿಟ್ ಆಫ್ ಇಂಡಿಯಾಸ್ ಪೊಲಿಟಿಕಲ್ ಬ್ಯಾಟಲ್ಸ್ – ಕರ್ನಾಟಕ' ಆಂಗ್ಲ ಭಾಷೆಯ ಪುಸ್ತಕವನ್ನು ವಿಧಾನಸಭಾಧ್ಯಕ್ಷ ಕೆ.ಆರ್. ರಮೇಶ್‌ಕುಮಾರ್ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಸಭಾಪತಿ ಪ್ರೊ. ಬಿ.ಕೆ. ಚಂದ್ರಶೇಖರ್, ಲೇಖಕ ಸಿ.ಎಂ. ರಾಮಚಂದ್ರ, ಹಿರಿಯ ಪತ್ರಕರ್ತರಾದ ಅರಕೆರೆ ಜಯರಾಂ. ಟಿ.ಎಸ್. ರಂಗಣ್ಣ ಮತ್ತಿತರರು ಉಪಸ್ಥಿತರಿದ್ದರು.